17

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 20-12-20

# ಹಿರಿಯ ಚಿತ್ರ ನಿರ್ದೇಶಕ ಬೂದಾಳ್ ಕೃಷ್ಣಮೂರ್ತಿ ನಿಧನ

**ಬೆಂಗಳೂರು:** ಚಲನಚಿತ್ರ ಹಿರಿಯ ನಿರ್ದೇಶಕ ಬೂದಾಳ್ ಕೃಷ್ಣಮೂರ್ತಿ (71) ಶನಿವಾರ ಮುಂಜಾನೆ ನಿಧನರಾಗಿದ್ದಾರೆ. ಕೆಲ ದಿನಗಳಿಂದ ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಬೂದಾಳ್ ಕೃಷ್ಣಮೂರ್ತಿ ಬೆಂಗಳೂರಿನ ತಮ್ಮ ಮನೆಯಲ್ಲಿ ನಿಧನರಾಗಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹುಳಿಯಾರು ಸಮೀಪದ ಬೂದಾಳುವಿನಲ್ಲಿ ಜನಿಸಿದ ಕೃಷ್ಣಮೂರ್ತಿ, ತಮ್ಮ ಪದವಿ ಪೂರ್ಣಗೊಳಿಸಿ ಬೆಂಗಳೂರಿಗೆ ಬಂದು ಚಿತ್ರರಂಗದಲ್ಲಿ ಸಕ್ರಿಯರಾದರು. ಆರಂಭದಲ್ಲಿ



ಹಿರಿಯ ನಿರ್ದೇಶಕ ಸಿದ್ದಲಿಂಗಯ್ಯ ನಿರ್ದೇಶನದ 'ದೂರದ ಬೆಟ್ಟ' ಚಿತ್ರದಲ್ಲಿ ಅಪ್ರೆಂಟಿಸ್ ಆಗಿ ಚಿತ್ರರಂಗ ಪ್ರವೇಶಿಸಿದ ಬೂದಾಳ್ ಕೃಷ್ಣಮೂರ್ತಿ, ನಂತರ ಸಿದ್ದಲಿಂಗಯ್ಯನವರ 'ಭೂತಯ್ಯನ ಮಗ ಅಯ್ಯು', 'ಹೇಮಾವತಿ' ಸೇರಿ ಹಲವು ಚಿತ್ರಗಳಿಗೆ ಸಹಾಯಕ ನಿರ್ದೇಶಕರಾಗಿ ಕಾರ್ಯ ನಿರ್ವಹಿಸಿದರು. ಬಳಿಕ 'ಎರಡು ದಂಡೆಯ ಮೇಲೆ' ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾದ ಬೂದಾಳ್ ಕೃಷ್ಣಮೂರ್ತಿ, 'ಒಲವಿನ ಕಾಣಿಕೆ', 'ಸೀತಾ ಆಂಜನೇಯ', 'ಶುಭಲಗ್ನ', 'ಲಂಚಸಾಮ್ರಾಜ್ಯ' ಸೇರಿ ಹಲವು ಚಿತ್ರಗಳನ್ನು ನಿರ್ದೇಶಿಸಿದ್ದರು. ಬೂದಾಳ್ ಕೃಷ್ಣಮೂರ್ತಿ ನಿರ್ದೇಶನದ ಕೊನೆಯ ಚಿತ್ರ 'ಇದೊಳ್ಳೆ ಮಹಾಭಾರತ' ಬಿಡುಗಡೆಗೆ ಸಿದ್ಧವಾಗಿದ್ದು ಇನ್ನಷ್ಟೇ ತೆರೆ ಕಾಣಬೇಕಿದೆ. ನಟನೆಯಲ್ಲೂ ಸಕ್ರಿಯರಾಗಿದ್ದು ಸುಮಾರು 50ಕ್ಕೂ ಹೆಚ್ಚು ಚಿತ್ರಗಳಲ್ಲಿ ವಿವಿಧ ಪಾತ್ರಗಳಿಗೆ ಬಣ್ಣ ಹಚ್ಚಿದ್ದರು. ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಉಪಾಧ್ಯಕ್ಷರಾಗಿದ್ದರು. ಬೂದಾಳ್ ಕೃಷ್ಣಮೂರ್ತಿ ನಿಧನಕ್ಕೆ ಚಿತ್ರರಂಗದ ಅನೇಕರು ಸಂತಾಪ ಸೂಚಿಸಿದ್ದಾರೆ.